# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 133 | Pages. 2 | Date: 27-03-2025, THURSDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 133 - ಪುಟಗಳು : 2 - 27 ಮಾರ್ಚ್ 2025 ಗುರುವಾರ | Ph: 8762954248 | ದರ : ₹1


# ಹಾಸನ ನಗರಸಭೆ : 4.63 ಕೋಟಿ ರೂ. ಉಳಿತಾಯ ಬಜೆಟ್

## ಗೊರೂರು ಪ್ರವಾಸಿ ಮಂದಿರದಲ್ಲಿ ಸಭೆ

## ಕೆರೆಗಳ ಪುನಶ್ಚೇತನಕ್ಕೆ ಆದ್ಯತೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರಸಭೆ ಅಧ್ಯಕ್ಷ ಎಂ. ಚಂದ್ರೇಗೌಡ ಅವರು ಬುಧವಾರ 2025-26ನೇ ಸಾಲಿನ ಆಯವ್ಯಯ ಮಂಡಿಸಿದರು.

ಗೊರೂರಿನ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡಿದ್ದ ವಿಶೇಷ ಬಜೆಟ್ ಮಂಡನೆ ಸಭೆಯಲ್ಲಿ ಅಧಿಕಾರಿಗಳು ಹಾಗೂ ಸರ್ವ ಸದಸ್ಯರ ಸಮ್ಮುಖದಲ್ಲಿ 4.63 ಕೋಟಿ ರೂ. ಉಳಿತಾಯ ಬಜೆಟ್ ಮಂಡಿಸಿದರು.

ಸಭೆಯಲ್ಲಿದ್ದ ಎಲ್ಲ ಸದಸ್ಯರು ಬಜೆಟ್ ಅನುಮೋದಿಸಿದರು.

2025-26ನೇ ಸಾಲಿಗೆ ರಾಜಸ್ವ ಖಾತೆಯಲ್ಲಿ ಒಟ್ಟು 7522.5 ಲಕ್ಷ ಆದಾಯ ನಿರೀಕ್ಷಿಸಲಾಗಿದೆ.

ಹಾಗೆಯೇ ಅಸಾಮಾನ್ಯ ಖಾತೆಯಿಂದ 29850 ಲಕ್ಷ ರೂ. ಆದಾಯ ನಿರೀಕ್ಷಿಸಲಾಗಿದೆ.



ಪ್ರಮುಖವಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಹಲವು ಯೋಜನೆ ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷ ಚಂದ್ರೇಗೌಡ ಹೇಳಿದರು.

ನಗರದಾದ್ಯಂತ ರಸ್ತೆ ಮತ್ತು ಪಾದಚಾರಿ ರಸ್ತೆ ಕಾಮಗಾರಿ ನಡೆಯುತ್ತಿದ್ದು, ಅದಕ್ಕಾಗಿ 10,000 ಲಕ್ಷ ರೂ. ಕಾಯ್ದಿರಿಸಲಾಗಿದೆ.

ದುರಸ್ತಿ ನಿರ್ವಹಣೆಗಾಗಿ 500 ಲಕ್ಷ ರೂ. ಮೀಸಲಿಡಲಾಗಿದೆ. ನೀರು ಸರಬರಾಜು ಕಾಮಗಾರಿಗೆ 1500 ಲಕ್ಷ, ಪೈಪ್ ಲೈನ್ ದುರಸ್ತಿ ಕಾಮಗಾರಿ ಮತ್ತು ನಿರ್ವಹಣೆಗೆ 1000 ಲಕ್ಷ ರೂ. ಮೀಸಲಿರಿಸಲಾಗಿದೆ.

ನಗರದ ಬೆಳವಣಿಗೆಗೆ ತಕ್ಕಂತೆ ಉತ್ತಮ ಒಳಚರಂಡಿ ವ್ಯವಸ್ಥೆ ಕಲ್ಪಿಸಲು 7000 ಲಕ್ಷ, ಯುಜಿಡಿ, ಪೈಪ್‌ಲೈನ್ ರಿಪೇರಿಗಾಗಿ 540 ಲಕ್ಷ ರೂ. ಕಾಯ್ದಿರಿಸಲಾಗಿದೆ. ನಗರಸಭೆ ಮುಂದುವರಿದ ಕಚೇರಿ ಕಟ್ಟಡ ನಿರ್ಮಾಣಕ್ಕೆ 1310 ಲಕ್ಷ ಕಾಯ್ದಿರಿಸಲಾಗಿದೆ. ಹಾಗೆಯೇ ಪೌರಾಯುಕ್ತರ ವಸತಿ ಗೃಹ ನಿರ್ಮಾಣಕ್ಕಾಗಿ 100 ಲಕ್ಷ ಇಡಲಾಗಿದೆ.

ಈ ಆರ್ಥಿಕ ವರ್ಷದಲ್ಲಿ ನಗರದಲ್ಲಿ ಸೂಕ್ತ ಸ್ಥಳ ಗುರುತಿಸಿ ಸುಸಜ್ಜಿತವಾದ ಸಗಟು ಮತ್ತು ಚಿಲ್ಲರೆ ಮಾರಾಟದ ಮೀನು ಮಾರುಕಟ್ಟೆ ಸಂಕೀರ್ಣ ನಿರ್ಮಿಸಲು ಉದ್ದೇಶಿಸಿ 50 ಲಕ್ಷ ರೂ. ಕಾಯ್ದಿರಿಸಲಾಗಿದೆ. ನಗರಸಭೆ ವ್ಯಾಪ್ತಿಯ ಸ್ಮಶಾನಗಳ (ವಿದ್ಯುತ್) ಅಭಿವೃದ್ಧಿಗೆ 500 ಲಕ್ಷ ರೂ. ಕಾಯ್ದಿರಿಸಲಾಗಿದೆ ಮೀಸಲಿಡಲಾಗಿದೆ.

### ಪರಿಸರ ಪ್ರಿಯ ಕಾರ್ಯಕ್ರಮ

ಇತ್ತೀಚಿನ ದಿನಗಳಲ್ಲಿ ವರ್ಷದಿಂದ ವರ್ಷಕ್ಕೆ ಮಳೆಯ ಪ್ರಮಾಣ ಕುಂಠಿತಗೊಂಡು ತಾಪಮಾನ ಏರಿಕೆ ಆಗಿ ಪರಿಸರ ಮಾಲಿನ್ಯ ಉಂಟಾಗಿದೆ. ಇದನ್ನು ತಡೆಗಟ್ಟಲು ಪರಿಸರ ಉಳಿಸಿ ಆಂದೋಲನ, ಕೆರೆಗಳ ಪುನಶ್ಚೇತನ, ಪ್ರಮುಖ ರಸ್ತೆ, ಪಾರ್ಕ್‌ಗಳಲ್ಲಿ ಹಾಗೂ ಅಗಿಲೆ ನೆಲಭರ್ತಿ ಘಟಕದ ಸುತ್ತಮುತ್ತ ಗಿಡಗಳನ್ನು ನೆಡಲು 80 ಲಕ್ಷ ರೂ. ಕಾಯ್ದಿರಿಸಲಾಗಿದೆ. ಬೀದಿ ದೀಪಗಳಿಗೆ ವ್ಯವಸ್ಥಿತ ಸ್ವಿಚ್ ಬೋರ್ಡ್ ಹಾಕಲು ನಿರ್ಧಾರ ಮಾಡಲಾಗಿದೆ.

ಅಗಿಲೆ ನೆಲಭರ್ತಿ ಜಾಗದಲ್ಲಿ ಹಲವು ವರ್ಷಗಳಿಂದ ಸಂಗ್ರಹಣೆ ಮಾಡಲಾಗಿರುವ ಹಳೆ ತ್ಯಾಜ್ಯದ ರಾಶಿಯನ್ನು ವಸ್ತು ನಿಯಮ 2016 ಮತ್ತು ರಾಷ್ಟ್ರೀಯ ಹಸಿರು ನ್ಯಾಯಪೀಠದ ನಿರ್ದೇಶನದಂತೆ ಸಂಸ್ಕರಣೆ ಮಾಡಲು ಡಿಪಿಆರ್ ತಯಾರಿಸಲಾಗಿದ್ದು, ಸ್ವಚ್ಛ ಭಾರತ್ ಮಿಷನ್ 2.0 ಯೋಜನೆಯಡಿ ಒಟ್ಟು 2800 ಲಕ್ಷಗಳಲ್ಲಿ ಕೇಂದ್ರ-ರಾಜ್ಯದ ಪಾಲಿನ ಮತ್ತು ಸ್ಥಳೀಯ ಸಂಸ್ಥೆ ನಿಧಿಯಿಂದ ಕಾಯ್ದಿರಿಸಲಾಗಿದೆ ಎಂದು ಅಧ್ಯಕ್ಷರು ವಿವರಿಸಿದರು.

> ಈ ಆಯವ್ಯಯ ಮಂಡಿಸಲು ಸಲಹೆ, ಸೂಚನೆ, ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ.
> ನಗರದ ನಾಗರಿಕರಿಗೆ ಮೆಚ್ಚುಗೆಯಾಗುವ ರೀತಿಯಲ್ಲಿ ನಗರದ ಸರ್ವತೋಮುಖ ಅಭಿವೃದ್ಧಿ ಹಿತದೃಷ್ಟಿಯನ್ನು ಒಳಗೊಂಡಿದೆ.
> - ಎಂ.ಚಂದ್ರೇಗೌಡ, ನಗರಸಭೆ ಅಧ್ಯಕ್ಷ

> ನಗರಸಭೆ ಬಜೆಟ್ ಆಶಾದಾಯಕವಾಗಿದೆ. ನಗರಸಭೆಗೆ ಸೇರಿರುವ ಹೊಸ ಹಳ್ಳಿಗಳ ಅಭಿವೃದ್ಧಿ ಸೇರಿದಂತೆ ರಸ್ತೆ, ಒಳಚರಂಡಿ, ನೀರು, ಮೂಲ ಭೂತ ಸೌಕರ್ಯ ಕಲ್ಪಿಸಲು ಅನುದಾನ ನಿಗದಿ ಜೊತೆಗೆ ಕ್ರೀಡೆ, ಹಬ್ಬ ಹರಿದಿನ, ಪೌರಕಾರ್ಮಿಕರ ಗೃಹ ನಿರ್ಮಾಣಕ್ಕೂ ಹಣ ಹಂಚಿಕೆ ಮಾಡಲಾಗಿದೆ. ಹಸಿರೀಕರಣಕ್ಕೂ ಒತ್ತು ನೀಡಲಾಗಿದೆ. ಪಕ್ಷಾತೀತವಾಗಿ ನಗರಸಭೆ ಉತ್ತಮ ರೀತಿಯಲ್ಲಿ ಅಭಿವೃದ್ಧಿಯಾಗಲಿ.
> -ಡಾ. ಸೂರಜ್ ರೇವಣ್ಣ ಎಂಎಲ್‌ಸಿ

## ಜಿಲ್ಲೆಯಲ್ಲಿ ಭ್ರಷ್ಟಾಚಾರ ತಾಂಡವ: ಸೂರಜ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾ ಪಂಚಾಯಿತಿಯಲ್ಲಿ ಭ್ರಷ್ಟಾಚಾರ ಮಿತಿ ಮೀರಿದ್ದು ಕಮಿಷನ್ ಕೊಡದಿದ್ದರೆ ಯಾವ ಕೆಲಸಗಳೂ ಆಗುತ್ತಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ಆರೋಪಿಸಿದರು.

ತಾಲ್ಲೂಕಿನ ಗೊರೂರಿನಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿ, ಜಿಪಂಗೆ ಚುನಾಯಿತ ಪ್ರತಿನಿಧಿಗಳು ಇಲ್ಲದ ಕಾರಣ ಅಧಿಕಾರಿಗಳ ಕಾರುಬಾರು ಹೆಚ್ಚಾಗಿದೆ. ಈ ಬಗ್ಗೆ ಶಾಸಕರಾದ ಸಿಮೆಂಟ್ ಮಂಜು, ಹೆಚ್.ಕೆ. ಸುರೇಶ್, ಹೆಚ್.ಡಿ. ರೇವಣ್ಣ ಅಧಿವೇಶನದಲ್ಲೇ ಚರ್ಚೆ ಮಾಡಿದ್ದಾರೆ. ಜಿಪಂನಲ್ಲಿ ನರೇಗಾ ಸೇರಿದಂತೆ ಯಾವುದೂ ಪಾರದರ್ಶಕವಾಗಿ ನಡೆಯುತ್ತಿಲ್ಲ ಎಂದು ಬೇಸರ ಹೊರ ಹಾಕಿದರು.

ಜಿಲ್ಲೆಯ ಗ್ರಾಪಂ, ತಾಪಂನಿಂದಲೂ ಅನೇಕ ಕಾಮಗಾರಿಗಳಿಗೆ ಪರ್ಸಂಟೇಜ್ ಕೊಡಬೇಕಿದೆ. ಈ ಬಗ್ಗೆ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೂ ಮನವಿ ಮಾಡುತ್ತೇನೆ. ಭ್ರಷ್ಟಾಚಾರ ಮಿತಿ ಮೀರಲು ಕಾರಣರಾಗಿರುವ ಸಿಇಒ ಅವರನ್ನು ವರ್ಗ ಮಾಡಬೇಕು ಎಂದು ಮನವಿ ಮಾಡಿದರು.

ಕೇಂದ್ರ ಸರ್ಕಾರದ ಆರ್‌ಸಿಹೆಚ್ ಅನುದಾನದಡಿ ಜಿಲ್ಲೆಗೆ ಬಂದಿದ್ದ 5 ಕೋಟಿ ಹಣ ವಿನಿಯೋಗದಲ್ಲೂ ಸಾಕಷ್ಟು ಅವ್ಯವಹಾರ ನಡೆದಿದ್ದು, ಈ ಬಗ್ಗೆ ಸಂಬಂಧಪಟ್ಟವರು ಶ್ವೇತಪತ್ರ ಹೊರಡಿಸಿ, ಲೆಕ್ಕಪತ್ರ ನೀಡಬೇಕು ಎಂದು ಒತ್ತಾಯಿಸಿದರು. ಹನಿಟ್ರ್ಯಾಪ್ ಸರಿಯಲ್ಲ: ರಾಜಕೀಯ ಮಾಡುವುದಿದ್ದರೆ ನೇರವಾಗಿ ಮಾಡಬೇಕು. ಅಭಿವೃದ್ಧಿ ಪೂರಕ, ಪಾರದರ್ಶಕವಾಗಿರಬೇಕು. ಅದನ್ನು ಬಿಟ್ಟು ವೈಯಕ್ತಿಕ ಹಿತಸಾಧನೆ, ಬೇರೊಬ್ಬರನ್ನು ಹಣಿಯಲು ಅಥವಾ ಸಿಎಂ ಆಗಲು ಹನಿಟ್ರ್ಯಾಪ್ ನಂತರ ಬ್ಲಾಕ್ ಮೇಲ್ ರಾಜಕಾರಣ ಮಾಡುವುದು ಒಳ್ಳೆಯ ಬೆಳವಣಿಗೆ ಅಲ್ಲ ಎಂದು ಹೇಳಿದರು.

## ಅಲೆಮಾರಿಗಳಿಗೆ ಸೌಕರ್ಯಕ್ಕೆ ಆದ್ಯತೆ: ಪಲ್ಲವಿ

### 48 ಕುಟುಂಬಗಳಿಗೆ ಸೂರು ಕಲ್ಪಿಸಲು ಸೂಚನೆ : ಮಕ್ಕಳ ಶಿಕ್ಷಣ ಪ್ರೋತ್ಸಾಹಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹತ್ತಾರು ವರ್ಷಗಳಿಂದ ಸ್ವಂತ ಸೂರಿಲ್ಲದೆ, ಶಿಕ್ಷಣ, ಆರ್ಥಿಕವಾಗಿ ವಂಚಿತರಾಗಿರುವ ಅಲೆಮಾರಿಗಳಿಗೆ ಉತ್ತಮ ಬದುಕು ಕಟ್ಟಿಕೊಡುವುದು ಸರ್ಕಾರದ ಆದ್ಯತೆ ಎಂದು ಪರಿಶಿಷ್ಟ ಜಾತಿ ಹಾಗು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ. ಪಲ್ಲವಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,

ನಗರದ ಬೊಂಬೂ ಬಜಾರ್‌ನಲ್ಲಿ ವಾಸ ಮಾಡುತ್ತಿರುವ 48 ಅಲೆಮಾರಿ ಕುಟುಂಬಗಳಿಗೆ ನಿವೇಶನ ಮಂಜೂರಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಹಾಸನದ ಬೊಂಬು ಬಜಾರ್‌ಗೆ ಭೇಟಿ ನೀಡಿದಾಗ ಅಲ್ಲಿನ ನಿವಾಸಿಗಳು ನಗರಸಭೆ ವ್ಯಾಪ್ತಿಯ ಸರ್ಕಾರಿ ಜಾಗದಲ್ಲಿ 70-80 ವರ್ಷದಿಂದ ವಾಸ ಮಾಡುತ್ತಿದ್ದೇವೆ. ಭೂಮಿಯನ್ನು ಸ್ಲಂ ಬೋರ್ಡ್‌ಗೆ ವಹಿಸದೆ ನಮಗೆ ನೀಡಿದರೆ ಕಂದಾಯ ಕಟ್ಟುತ್ತೇವೆ. ಪಾರಂಪರಿಕ ವೃತ್ತಿಯಾಗಿರುವ ಬಿದಿರು



ಗೊಂಬೆಗಳ ತಯಾರಿಕೆ ವೃತ್ತಿಯಲ್ಲಿ ತೊಡಗಿರುವುದಾಗಿ ಹೇಳಿದ್ದಾರೆ. ಅದಕ್ಕೆ ಪೂರಕವಾಗಿ ಕುಂದು ಕೊರತೆ ಅಹವಾಲು ಸಭೆ ನಡೆಸಲಾಗಿದೆ. ಜಿಲ್ಲಾಧಿಕಾರಿ ಸಹ ಸಮಸ್ಯೆಗೆ ಪರಿಹಾರ ಕಲ್ಪಿಸುವ ಭರವಸೆ ನೀಡಿದ್ದಾರೆ ಎಂದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅಲೆಮಾರಿ ಸಮುದಾಯದ ಮಕ್ಕಳಿಗೆ ಶಾಲೆಗೆ ಸೇರಲು ಶೇ. 10 ರಷ್ಟು ಪ್ರವೇಶ ಪರೀಕ್ಷೆ ರಹಿತ ನೇರವಾಗಿ ನೇಮಕ ಮಾಡುವಂತೆ ಸರ್ಕಾರದ ಆದೇಶವಾಗಿದೆ. 6ನೇ ತರಗತಿಯಿಂದ ಪಿ.ಯು.ಸಿ ವರೆಗೆ ಉಚಿತವಾಗಿ ಆಂಗ್ಲ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಲು ಅವಕಾಶ ಕಲ್ಪಿಸಲಾಗಿದೆ. ಯೋಜನೆ ಬಗೆಗೆ ಅರಿವು ಮೂಡಿಸುವ ಕಾರ್ಯಕ್ರಮ ಮಾಡಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಅವರ ಶಿಕ್ಷಣಕ್ಕೆ, ಕಾನೂನು ನೆರವಿಗೆ ತಾವೆಲ್ಲರೂ ಸಹಕರಿಸುತ್ತಿರಿ ಎಂದು ಭಾವಿಸಿದ್ದೇವೆ ಎಂದರು.

ಬಹಳ ವರ್ಷಗಳಿಂದ ಅಲೆಮಾರಿ ಜನಾಂಗದವರಿಗೆ ಹಕ್ಕು ಪತ್ರವನ್ನು ನೀಡಿಲ್ಲ. ಜೋಪಡಿಗಳಲ್ಲಿ ವಾಸ ಮಾಡುತ್ತಿರುವುದರಿಂದ ಅವರಿಗೆ ಮಳೆ ಸಂದರ್ಭದಲ್ಲಿ ಅನೇಕ ರೀತಿಯ ತೊಂದರೆಗಳಾಗುತ್ತಿವೆ. ಸಂಬಂಧಪಟ್ಟ ಅಧಿಕಾರಿಗಳು ಒಂದು ವಾರದಲ್ಲಿ ಸಮಸ್ಯೆ ಬಗೆಹರಿಸಿ ಹಕ್ಕುಪತ್ರ ನೀಡುವ ಭರವಸೆ ನೀಡಿದ್ದಾರೆ ಎಂದು ಹೇಳಿದರು.

ಮೂರು ತಿಂಗಳಿಗೊಮ್ಮೆ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಸಮುದಾಯದ ಕುಂದುಕೊರತೆ ಸಭೆ ನಡೆಯಬೇಕೆಂದು ಸರ್ಕಾರದ ಆದೇಶವಿದೆ. ಆದರೆ ಆ ಸಭೆ ಮಾಹಿತಿಯ ಕೊರತೆಯಿಂದ ಜಿಲ್ಲೆಯಲ್ಲಿ ನಡೆದಿಲ್ಲ. ಮುಂದಿನ ದಿನಗಳಲ್ಲಿ ಸಭೆ ನಡೆಸಿ ಅವರ ಅಹವಾಲು ಸ್ವೀಕರಿಸಿ ಬಗೆಹರಿಸುತ್ತೇವೆ ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ ಎಂದರು.

ಅಲೆಮಾರಿ ಸಮುದಾಯದ ಜನರಿಗೆ ಸರ್ಕಾರ ಆರ್ಥಿಕವಾಗಿ ಸಬಲರಾಗಲು ಬ್ಯಾಂಕ್‌ಗಳಿಂದ ಅನೇಕ ರೀತಿಯ ಯೋಜನೆ ಜಾರಿಗೊಳಿಸಲಾಗಿದೆ. ಅವುಗಳ ಕುರಿತಾಗಿ ಸಮಸ್ಯೆಗಳು ಬಂದಾಗ ಲೀಡ್ ಬ್ಯಾಂಕ್‌ನವರು ಅಲೆಮಾರಿ ಜನಾಂಗದವರಿಗೆ ಸಹಕರಿಸಿ ಎಂದು ಬ್ಯಾಂಕ್ ವ್ಯವಸ್ಥಾಪಕರಿಗೆ ತಿಳಿಸಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲಾಧಿಕಾರಿ ಸಿ. ಸತ್ಯಭಾಮ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ವೆಂಕಟೇಶ್ ನಾಯ್ಡು, ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ವಿ.ಎಸ್. ಆನಂದ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಪಿ. ದೂದ್‌ಪೀರ್ ಮತ್ತಿತರರು ಇದ್ದರು.

## ವೆಂಕಟೇಶ್ ಬ್ರಾಹ್ಮಣ ಸಭಾ ಜಿಲ್ಲಾ ಪ್ರತಿನಿಧಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್


ಹಾಸನ: ಅಖಿಲ ಕರ್ನಾಟಕ ಬ್ರಾಹ್ಮಣ ಸಭಾಗೆ ಜಿಲ್ಲಾ ಪ್ರತಿನಿಧಿಯಾಗಿ ಪಿ.ಎಸ್. ವೆಂಕಟೇಶ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ನಗರ ಬ್ರಾಹ್ಮಣ ಸಭಾ ಅಧ್ಯಕ್ಷ ಹೆಚ್.ಎಸ್. ಮಂಜುನಾಥ ಮೂರ್ತಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, 2025-2030ರ ವರೆಗಿನ ಅಧ್ಯಕ್ಷೀಯ ಚುನಾವಣೆ ಏ. 13 ರಂದು ನಡೆಯಲಿದೆ. ಅಧ್ಯಕ್ಷ ಸ್ಥಾನ ಚುನಾವಣೆಗೆ ಬೆಂಗಳೂರಿನ ರಘುನಾಥ ಹಾಗೂ ಶ್ರೀರಂಗಪಟ್ಟಣದ ಭಾನುಪ್ರಕಾಶ್ ಶರ್ಮಾ ಸ್ಪರ್ಧಿಸಿದ್ದಾರೆ. ಜಿಲ್ಲಾ ಬ್ರಾಹ್ಮಣ ಸಭಾ, ಜಿಲ್ಲಾ ಪ್ರತಿನಿಧಿ ಆಯ್ಕೆ ಸಂಬಂಧ ಎಲ್ಲಾ ತಾಲ್ಲೂಕುಗಳ ಪದಾಧಿಕಾರಿಗಳ ಹಾಗೂ ಉಪ ಪಂಗಡಗಳ ಮುಖಂಡರೊಂದಿಗೆ ಸಭೆ ನಡೆಸಿ ಈ ತೀರ್ಮಾನಕ್ಕೆ ಬರಲಾಗಿದೆ ಎಂದರು.

ವೆಂಕಟೇಶ್ ಅವರು ತಟಸ್ಥ ಅಭ್ಯರ್ಥಿಯಾಗಿದ್ದು, ಯಾವುದೇ ಬಣಕ್ಕೂ ಸೇರದೆ ಜಿಲ್ಲಾ ಬ್ರಾಹ್ಮಣ ಸಮಾಜದ ಒಗ್ಗಟ್ಟು ಪ್ರದರ್ಶಿಸಲು ಸಲಹೆ ನೀಡಲಿದ್ದಾರೆ. ಸಭಾ ಹಾಗೂ ಉಪ ಪಂಗಡಗಳು ಮತ್ತು ತಾಲ್ಲೂಕು ಸಂಘಗಳ ಮುಖಂಡರು ರಾಜ್ಯ ಚುನಾವಣೆಗೆ ಯಾವುದೇ ಬಣದ ಅಭ್ಯರ್ಥಿ ಪರವಾಗಿ ಪ್ರಚಾರ ಮಾಡುವುದಿಲ್ಲ ಎಂದು ಜಿಲ್ಲಾ ಬ್ರಾಹ್ಮಣ ಸಭಾದ ಸಭೆಯಲ್ಲಿ ನಿರ್ಣಯಿಸಲಾಗಿದೆ ಎಂದರು.

ವೆಂಕಟೇಶ್ ಅವರು ಜಿಲ್ಲೆಯನ್ನು ಪ್ರತಿನಿಧಿಸಿ ಸಮುದಾಯದ ಏಳಿಗೆಗೆ ಶ್ರಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ನಾಗರಾಜ್, ವೆಂಕಟೇಶ್, ಕೆಪಿಎಸ್ ಪ್ರಮೋದ್, ಶ್ರೀಕಾಂತ್ ಇದ್ದರು.

## ಗ್ರಾಮೀಣ ಸಂಸ್ಕೃತಿ ಮರೆಯಬಾರದು: ಡಿಸಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಗ್ರಾಮೀಣ ಸಂಸ್ಕೃತಿಯೇ ನಮ್ಮ ಮೂಲವಾಗಿದ್ದು ಅದನ್ನು ಎಂದಿಗೂ ಮರೆಯಬಾರದು ಎಂದು ಜಿಲ್ಲಾಧಿಕಾರಿ ಸತ್ಯಭಾಮ ಸಿ. ಅಭಿಪ್ರಾಯಪಟ್ಟಿದ್ದಾರೆ.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜು-ಸ್ವಾಯತ್ತ ವತಿಯಿಂದ ಏರ್ಪಡಿಸಿದ್ದ ಜಾನಪದ ಉತ್ಸವ-2025 ನಮ್ಮ ಸಂಸ್ಕೃತಿ ನಮ್ಮ ಹೆಮ್ಮೆ ಮೈಸೂರು ಪ್ರಾದೇಶಿಕ ಮಟ್ಟದ ಸಮೂಹ ಜಾನಪದ ನೃತ್ಯ ಸ್ಪರ್ಧೆ ಸಮಾರಂಭ ಹಾಗೂ ಕಾಲೇಜು ಸಭಾಂಗಣದಲ್ಲಿ ಆಯೋಜಿಸಿದ್ದ ಕ್ಯಾಂಟೀನ್ ಡೇಗೆ ಚಾಲನೆ ನೀಡಿ ಮಾತನಾಡಿದರು.

ಯುವ ಪೀಳಿಗೆ ಸ್ವಾಭಿಮಾನ ಮತ್ತು ಬದ್ಧತೆಯನ್ನು ಇಟ್ಟುಕೊಳ್ಳಬೇಕು. ಕಲಾ ವಿಭಾಗದ ವಿಷಯಗಳನ್ನು ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು ಕುಗ್ಗಬಾರದು. ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಕಲಾ ವಿಭಾಗದ ವಿಷಯಗಳಿಂದ ಸಹಾಯವಾಗುತ್ತದೆ ಎಂದರು.

ಜಿಲ್ಲಾಧಿಕಾರಿ ನ್ಯಾಯಾಲಯದಲ್ಲಿ ಹಲವಾರು ಪ್ರಕರಣಗಳಲ್ಲಿ ಆಸ್ತಿ ವಿವಾದ ಸೇರಿ ಹಲವಾರು ಪ್ರಕರಣಗಳು ಬರುತ್ತದೆ. ಅದರಲ್ಲಿ ತಂದೆ ಮಕ್ಕಳ ವಿಚಾರಕ್ಕೆ ಸಂಬಂಧಿತ ಪ್ರಕರಣಗಳನ್ನು ಕಂಡಾಗ ಬೇಸರ ಉಂಟಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಅನಕ್ಷರಸ್ಥರ ಪ್ರಮಾಣ ಕಡಿಮೆ ಇದೆ. ಶೈಕ್ಷಣಿಕ ಇಲಾಖೆಗಳು ಓದದವರನ್ನು ಕರೆತಂದು ಶಿಕ್ಷಣ ನೀಡುವ ಕೆಲಸ ಮಾಡುತ್ತಿದೆ ಎಂದು ಅವರು ತಿಳಿಸಿದರು.

ಹೊಣೆಗಾರಿಕೆಯನ್ನು ಅರಿತು ಎಲ್ಲರೂ ಜೀವನ ನಡೆಸಬೇಕು. ಗುರುಗಳಿಗೆ ಗೌರವ ನೀಡುವ ಪ್ರವೃತ್ತಿಯನ್ನು ವಿದ್ಯಾರ್ಥಿಗಳು ರೂಢಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಜಾನಪದ ಅಕಾಡೆಮಿ ಸದಸ್ಯ ದೇವಾನಂದ ವರಪ್ರಸಾದ್ ಮಾತನಾಡಿ, ವಿದ್ಯಾರ್ಥಿಗಳು ಮೊಬೈಲ್ ದಾಸರಾಗುತ್ತಿದ್ದಾರೆ. ಜೀವನದ ಉತ್ಸಾಹ ಕಳೆದುಕೊಳ್ಳುತ್ತಿದ್ದಾರೆ. ನಾಲ್ಕು ಗೋಡೆ ಮಧ್ಯದಲ್ಲಿನ ಶಿಕ್ಷಣ ಕೇವಲ ಅಂಕಗಳಿಗೆ ಸೀಮಿತವಾಗಿರುತ್ತದೆ. ಇಂದು ಗ್ರಾಮೀಣ ಸೊಗಡನ್ನು ಬಿಂಬಿಸುವ ವಿಚಾರಗಳು ವಿದ್ಯಾರ್ಥಿಗಳಿಗೆ ಮುಟ್ಟಬೇಕು, ಹಲವಾರು ಸಂಸ್ಕೃತಿಗಳ ಮೂಲ ಜಾನಪದ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಎಂ.ಬಿ. ಇರ್ಷಾದ್ ಮಾತನಾಡಿ, ಸಂಸ್ಕೃತಿ ನಮ್ಮೆಲ್ಲರಿಗೂ ಗ್ರಾಮೀಣ ಸೊಗಡನ್ನು ಪದೇ ಪದೇ ನೆನಪಿಸುತ್ತದೆ. ನಮ್ಮ ಆಚಾರ ವಿಚಾರ ನಡೆ-ನುಡಿ ಉಡುಗೆ ತೊಡುಗೆಗಳು ಇಂದು ಪಾಶ್ಚಾತ್ಯೀಕರಣವಾಗಿದೆ. ಇದು ಬೇಸರದ ವಿಚಾರ ಎಂದರು.

ಸಂಸ್ಕೃತಿಕ ವೇದಿಕೆ ಸಂಚಾಲಕಿ ಡಾ. ಪಿ.ಆರ್. ಶಾಂತ ಮಾತನಾಡಿ, ಪ್ರತಿನಿತ್ಯ ತುರ್ತಿನಲ್ಲಿ ಜೀವನ ನಡೆಸುವಂತಾಗಿದೆ. ಆ ತುರ್ತಿನ ನಡುವೆಯೂ ಈ ರೀತಿಯ ಉತ್ಸವಗಳು ಜಾನಪದ ಸೊಗಡನ್ನು ಪ್ರತಿಬಿಂಬಿಸುತ್ತವೆ. ಶಾಂತಿಯುತ ಜೀವನ ನಡೆಸಬೇಕೆಂದರೆ ಜಾನಪದ ಸೊಗಡನ್ನು ಬೆಳೆಸಬೇಕು, ಉಳಿಸಬೇಕು ಎಂದರು.

ಕಾಲೇಜಿನ ಶೈಕ್ಷಣಿಕ ಡೀನ್ ಡಿ.ಎಸ್. ರಾಜು, ಪರೀಕ್ಷಾ ನಿಯಂತ್ರಕ ಡಾ. ಕೆ.ಡಿ. ಮುರಳೀಧರ, ಪತ್ರಾಂಕಿತ ಕೆ.ಟಿ. ಸತ್ಯಮೂರ್ತಿ ಇತರರಿದ್ದರು.

## 26 ಬೈಕ್ ಗಳ ಕಳ್ಳ ಪೊಲೀಸ್ ಬಲೆಗೆ!



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಬೈಕ್‌ಗಳನ್ನು ಕದ್ದು ಕಡಿಮೆ ಬೆಲೆಗೆ ಮಾರಾಟ ಮಾಡಿ ಬದುಕು ಕಟ್ಟಿಕೊಂಡಿದ್ದ ಕಳ್ಳನನ್ನು ಬಂಧಿಸಿ 26 ಬೈಕ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಆಲೂರು ತಾಲ್ಲೂಕು ಕೂಡಗತ್ತವಳ್ಳಿ ಗ್ರಾಮದ ಗಗನ್ ಬಂಧಿತ ಆರೋಪಿ. ಹಾಸನ, ಮಂಡ್ಯ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಬೈಕ್ ಕಳ್ಳತನ ಮಾಡಿದ್ದ ಎಂದು ಮಾಹಿತಿ ನೀಡಿದರು. ಕೆ.ಆರ್. ಪೇಟೆ ತಾಲ್ಲೂಕಿನ ಬಂಡಿಹೊಳೆ ಗ್ರಾಮದಲ್ಲಿ ವಾಸವಿದ್ದ ಗಗನ್ ಕೂಲಿ ಕೆಲಸ ಮಾಡಿಕೊಂಡಿದ್ದ. ಹೆಚ್ಚಿನ ಲಾಭಕ್ಕಾಗಿ ಬೈಕ್ ಕಳ್ಳತನ ಕೆಲಸದಲ್ಲಿ ನಿರತನಾಗಿದ್ದ. ಕದ್ದಿರುವ 26 ಬೈಕ್‌ಗಳಲ್ಲಿ 15 ಸ್ಪ್ಲೆಂಡರ್ ಪ್ಲಸ್ ವಾಹನಗಳಾಗಿವೆ. ಎಲ್ಲಿಯಾದರೂ ನಿಲ್ಲಿಸುತ್ತಿದ್ದ ಬೈಕ್‌ಗಳನ್ನು ದೂರದಿಂದಲೇ ನೋಡುತ್ತಿದ್ದ ಗಗನ್ ಮಾಲೀಕರು ನಿಲ್ಲಿಸಿ ಹೋಗುವುದನ್ನೇ ಕಾಯುತ್ತಿದ್ದ. ಹ್ಯಾಂಡಲ್ ಲಾಕ್ ಮಾಡದಿದ್ದರೆ ಕ್ಷಣಾರ್ಧದಲ್ಲೇ ಬೈಕ್ ಸಮೇತ ಪರಾರಿಯಾಗುತ್ತಿದ್ದ. ಇಲ್ಲವಾದರೆ ಲಾಕ್ ಮುರಿದು ಎಸ್ಕೇಪ್ ಆಗುತ್ತಿದ್ದ. ಕದ್ದ ಬಹುತೇಕ ಬೈಕ್‌ಗಳನ್ನು ಮಂಡ್ಯದಲ್ಲಿ ಕಡಿಮೆ ಬೆಲೆಗೆ ಮಾರಾಟ ಮಾಡಿದ್ದಾನೆ. ಸದ್ಯ ಜಿಲ್ಲೆಯಲ್ಲಿ ಕಳುವಾಗಿದ್ದ 15 ಬೈಕ್‌ಗಳನ್ನು ವಶಪಡಿಸಿಕೊಳ್ಳಲಾಗದೆ ಎಂದು ಮಾಹಿತಿ ನೀಡಿದರು.

ಮಾ. 3 ರಂದು ನಗರದ ಶಂಕರಿಪುರಂ ಬಡಾವಣೆಯಲ್ಲಿ ಚಂದ್ರಶೇಖರ್ ಎಂಬುವವರು ಮನೆ ಮುಂದೆ ನಿಲ್ಲಿಸಿದ್ದ ಬೈಕ್ ಕಳ್ಳತನವಾಗಿತ್ತು. ಈ ಸಂಬಂಧ ದೂರು ದಾಖಲಿಸಿಕೊಂಡಿದ್ದ ಬಡಾವಣೆ ಠಾಣೆ ಪೊಲೀಸರು ಹೊಸ ಬಸ್ ನಿಲ್ದಾಣದಲ್ಲಿ ಸಂಶಯಾಸ್ಪದವಾಗಿ ಓಡಾಡಿಕೊಂಡಿದ್ದ ಗಗನ್‌ನನ್ನು ವಿಚಾರಿಸಿದಾಗ ಕಳ್ಳತನದ ವಿಚಾರ ಬಾಯಿಬಿಟ್ಟಿದ್ದಾನೆ. ಬಂಧಿತನದಿಂದ 12 ಲಕ್ಷ ರೂ. ಮೌಲ್ಯದ 26 ಬೈಕ್ ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

## ವೀರಶೈವ ಮಹಾಸಭಾ ಮಮತಾ ಪಾಟೀಲ್ ಅಧ್ಯಕ್ಷೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ತಾಲ್ಲೂಕು ಮಹಿಳಾ ಘಟಕದ ಅಧ್ಯಕ್ಷರಾಗಿ ಮಮತಾ ಪಾಟೀಲ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಆಶಾದೇವಿ, ಶೀಲಾ ವಿಶ್ವನಾಥ್ ಮತ್ತು ಎಂ.ಬಿ. ಗಿರಿಜಾಂಬಿಕೆ, ಪ್ರಧಾನ ಕಾರ್ಯದರ್ಶಿಯಾಗಿ ಕೆ.ಎಸ್. ಧನಲಕ್ಷ್ಮೀ, ಸಹಕಾರ್ಯದರ್ಶಿಗಳಾಗಿ ಶೋಭಾ ಚಂದ್ರಶೇಖರ್, ಹೆಚ್.ಎಂ. ಇಂದಿರಾ ಸತೀಶ್ ಮತ್ತು ನಾಗರತ್ನ ಯೋಗೀಶ್, ಖಜಾಂಚಿಯಾಗಿ ಶೈಲಾ ಮದನ್ ಆಯ್ಕೆಯಾಗಿದ್ದಾರೆ. ನಿರ್ದೇಶಕರಾಗಿ ಮೈತ್ರಿ ವಿನಯ್, ರತ್ನ ಸೋಮಶೇಖರ್, ಶುಭಾ ಲತೇಶ್, ಸರಸ್ವತಿ ಚಂದ್ರಶೇಖರ್, ಭಾಮಿನಿ ಹೇಮಂತ್, ವೀಣಾ ದೇವರಾಜ್, ಶ್ವೇತಾ ನಂದಕುಮಾರ್, ಅನುಸೂಯಾ, ಸುಶೀಲಾ ಪಾಲನೇತ್ರ, ಕಮಲಾ ಚಂದ್ರಶೇಖರ್, ಸವಿತಾ ಮತ್ತು ದಾಕ್ಷಾಯಿಣಿ ಆಯ್ಕೆಯಾಗಿದ್ದಾರೆ.

ನಗರದ ಬಸವೇಶ್ವರ ಕಲ್ಯಾಣ ಮಂದಿರದ ಬಸವೇಶ್ವರ ದೇವಾಲಯದಲ್ಲಿ ತಾಲ್ಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಕಟ್ಟಾಯ ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಹೊಸ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನೆರವೇರಿತು.

ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಶೋಭಾ ಮಹೇಶ್ ಮತ್ತು ಅನುಸೂಯಾ ಚನ್ನಬಸಯ್ಯ, ತಾಲ್ಲೂಕು ಸಮಿತಿ ಉಪಾಧ್ಯಕ್ಷರಾದ ಹೆಚ್.ಪಿ. ಹೇಮೇಶ್ ಮತ್ತು ಲೀಲಾ ಧರ್ಮಪ್ಪ, ಪ್ರಧಾನ ಕಾರ್ಯದರ್ಶಿ ಹೆಚ್.ವಿ. ಹೇಮಂತ್, ಸಹಕಾರ್ಯದರ್ಶಿಗಳಾದ ಶೆಟ್ಟಿಹಳ್ಳಿ ಧರ್ಮ, ಕೆ.ಎನ್. ಚಾಂದಿನಿ ಭೂಷಣ್, ತಾಲ್ಲೂಕು ನಿರ್ದೇಶಕರಾದ ಮಯೂರಿ ಲೋಕೇಶ್, ಕಿರಣ್ ಕುಮಾರ್ ಹೊಸಮನಿ, ಡಿ.ವಿ. ಮದನ್, ಹೆಚ್.ಕೆ. ದಿಲೀಪ್, ದರ್ಶನ್, ರಾಜಶೇಖರ್ ಮೂರ್ತಿ, ಸಾವಿತ್ರಿ ವಿಜಯಕುಮಾರ್, ಸುಜಾತಾ ರಾಜಶೇಖರ್ ಮತ್ತು ಲತಾ ಸಂಪತ್ ಉಪಸ್ಥಿತರಿದ್ದರು.

ರಾಜ್ಯ ಸಮಿತಿಯ ಸದಸ್ಯರಾದ ಶಿವಕುಮಾರ್, ರಾಜ್ಯ ಮಹಿಳಾ ಸಮಿತಿ ನಿರ್ದೇಶಕಿ ನಾಗರತ್ನ, ಜಿಲ್ಲಾ ಉಪಾಧ್ಯಕ್ಷ ಪುನೀತ್ ಪಟೇಲ್ ಮತ್ತು ಗೀತಾ ಪುಟ್ಟಸ್ವಾಮಿ, ಜಿಲ್ಲಾ ನಿರ್ದೇಶಕರಾದ ಶೋಭನ್ ಬಾಬು ಹಾಗೂ ಇತರರಿದ್ದರು.

# ಧರ್ಮಸ್ಥಳ ಸಂಘದಿಂದ 160 ಕೆರೆಗಳ ಪುನಶ್ಚೇತನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಚನ್ನರಾಯಪಟ್ಟಣ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೈಸೂರು ವಿಭಾಗದ ವತಿಯಿಂದ 52 ಕೋಟಿ ರೂ. ವೆಚ್ಚದಲ್ಲಿ 160 ಕೆರೆಗಳ ಪುನಶ್ಚೇತನ ಮಾಡಲಾಗಿದೆ ಎಂದು ಯೋಜನೆಯ ಪ್ರಾದೇಶಿಕ ನಿರ್ದೇಶಕ ಜಯರಾಮ್ ನೆಲ್ಲಿತಾಯ ಹೇಳಿದರು.

ತಾಲ್ಲೂಕಿನ ಜುಟ್ಟನಹಳ್ಳಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿದ್ದ ನಾಮಫಲಕ ಅನಾವರಣ ಹಾಗೂ ಕೆರೆ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾತನಾಡಿ, ನಮ್ಮ ಊರು ನಮ್ಮ ಕೆರೆ ಕಾರ್ಯಕ್ರಮದಡಿ 5.40 ಲಕ್ಷ ರೂ. ವೆಚ್ಚದಲ್ಲಿ ಜುಟ್ಟನಹಳ್ಳಿ ಕೆರೆ ಹೂಳು ತೆಗೆದು ಅಭಿವೃದ್ಧಿಗೊಳಿಸಲಾಗಿದೆ. ಅದರಿಂದ ಕೆರೆಯು 6,008 ಗ್ಯಾಲನ್ ಮೀಟರ್ ನೀರಿನ ಸಂಗ್ರಹಣ ಸಾಮರ್ಥ್ಯ ಹೊಂದಿದ್ದು ಜನ ಜಾನವಾರುಗಳ ಕುಡಿಯುವ ನೀರಿಗೆ ಹೆಚ್ಚಿನ ಅನುಕೂಲವಾಗಿದೆ ಎಂದು ತಿಳಿಸಿದರು.

ಕೆರೆಯಿಂದ ಸುಮಾರು 2 ಸಾವಿರ ಟ್ರ್ಯಾಕ್ಟರ್ ಲೋಡಿನಷ್ಟು ಮಣ್ಣನ್ನು ಹೂಳು ತೆಗೆದಿದ್ದು ರೈತರ ಜಮೀನಿಗೂ ಫಲವತ್ತಾದ ಮಣ್ಣು ಸಿಕ್ಕಂತಾಗಿದೆ.

ಕೆರೆಯಲ್ಲಿ ಹೆಚ್ಚು ನೀರು ಸಂಗ್ರಹವಾಗುವುದರಿಂದ ಈ ವ್ಯಾಪ್ತಿಯಲ್ಲಿ ಅಂತರ್ಜಲ ಚೇತರಿಕೆ ಕಾಣಲಿದೆ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ಬೆಕ್ಕ ರಾಘವೇಂದ್ರ ಮಾತನಾಡಿ, ಅತಿ ಕಡಿಮೆ ಬಡ್ಡಿ ದರದಲ್ಲಿ ಮಹಿಳೆಯರಿಗೆ ಸಾಲಸೌಲಭ್ಯ ಸೇರಿದಂತೆ ಹತ್ತಾರು ಯೋಜನೆಗಳಡಿ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಅದೆಷ್ಟೋ ಕುಟುಂಬಗಳನ್ನು ಆರ್ಥಿಕವಾಗಿ ಮೇಲೆತ್ತಿರುವ ಹೆಗ್ಗಳಿಕೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಗೆ ಸಲ್ಲುತ್ತದೆ ಎಂದರು.

ಕೊಟ್ಟಿಗೆ ಹಾಗೂ ಶೌಚಾಲಯ ನಿರ್ಮಾಣಕ್ಕೆ ಸಹಾಯಧನ, ಹಾಲು ಉತ್ಪಾದಕರ ಸಹಕಾರ ಸಂಘಗಳ ಕಟ್ಟಡ ನಿರ್ಮಾಣಕ್ಕೆ ಅನುದಾನ, ಹೊಲಿಗೆ ಯಂತ್ರ ಸೇರಿದಂತೆ ಕರಕುಶಲ ತರಬೇತಿ ನೀಡುವ ಮೂಲಕ ಮಹಿಳೆಯರ ಬದುಕನ್ನು ಸಬಲೀಕರಣಗೊಳಿಸುವಲ್ಲಿ ಯಶಸ್ವಿಯ ಹಾದಿಯಲ್ಲಿ ಸಾಗುತ್ತಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಸಮ್ಮುಖದಲ್ಲಿ ಜುಟ್ಟನಹಳ್ಳಿ ಗ್ರಾಮಸ್ಥರಿಗೆ ಯೋಜನೆಯ ಅಧಿಕಾರಿಗಳು ನಾಮಫಲಕ ಅನಾವರಣದೊಂದಿಗೆ ಕೆರೆಯನ್ನು ಹಸ್ತಾಂತರಿಸಿದರು.

ಯೋಜನೆಯ ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ, ತಾಲೂಕು ಯೋಜನಾಧಿಕಾರಿ ಸದಾಶಿವ ಕುಲಾಲ್, ತಾಲೂಕು ಕೃಷಿ ಮೇಲ್ವಿಚಾರಕ ಟಿ.ಎಂ.ಮಹದೇವ ಪ್ರಸಾದ್, ಕೆರೆ ಸಮಿತಿಯ ಅಧ್ಯಕ್ಷ ಕೃಷ್ಣೇಗೌಡ, ಗ್ರಾಮ ಪಂಚಾಯಿತಿ ಸದಸ್ಯೆ ಗೀತಾಮಣಿ, ವಲಯದ ಮೇಲ್ವಿಚಾರಕ ಪರಮೇಶ್, ಸೇವಾ ಪ್ರತಿನಿಧಿಗಳಾದ ಆಶಾ, ಅನುಷಾ ಮತ್ತು ಗೀತಾ ಹಾಗೂ ಗ್ರಾಮಸ್ಥರು ಇದ್ದರು.

# ಬೇಲೂರು ಅರ್ಬನ್ ಬ್ಯಾಂಕ್‌ಗೆ ರವಿ ಅಧ್ಯಕ್ಷ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್‌ನ ನೂತನ ಅಧ್ಯಕ್ಷರಾಗಿ ಪೈಂಟ್ ರವಿ ಹಾಗೂ ಉಪಾಧ್ಯಕ್ಷರಾಗಿ ಸತೀಶ್ ಕೊರಟಿಕೆರೆ 1 ಮತಗಳ ಅಂತರದಿಂದ ಪ್ರತಿಸ್ಪರ್ಧಿಗಳ ವಿರುದ್ಧ ಆಯ್ಕೆಯಾದರು.

13 ನಿರ್ದೇಶಕರಿರುವ ಬ್ಯಾಂಕ್‌ನ ಅಧ್ಯಕ್ಷಸ್ಥಾನಕ್ಕಾಗಿ ಪೈಂಟ್ ರವಿ ಹಾಗೂ ಬಲರಾಮೇಗೌಡ, ಉಪಾಧ್ಯಕ್ಷಸ್ಥಾನಕ್ಕೆ ಕೊರಟಿಕೆರೆ ಸತೀಶ್ ಮತ್ತು ಕೇಬಲ್ ವಿಜಯ್‌ಕುಮಾರ್ ನಾಮಪತ್ರ ಸಲ್ಲಿಸಿದ್ದರು.

ಪೈಂಟ್ ರವಿ 7 ಮತ ಪಡೆದರೆ, ಪ್ರತಿಸ್ಪರ್ಧಿ ಬಲರಾಮೇಗೌಡ 6 ಮತ ಪಡೆದರು. ಉಪಾಧ್ಯಕ್ಷ ಸ್ಥಾನಕ್ಕೆ ಸತೀಶ್ 7 ಮತ ಪಡೆದರೆ, ವಿಜಯ್ ಕುಮಾರ್ 6 ಮತ ಪಡೆದರು. ಸಹಕಾರ ಸಂಘಗಳ ಉಪ ನಿಬಂಧಕ ಲೀಲಾ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.

ನೂತನ ಅಧ್ಯಕ್ಷ ಪೈಂಟ್ ರವಿ ಮಾತನಾಡಿ, ಬ್ಯಾಂಕ್ ಷೇರುದಾರರು ನಂಬಿಕೆ ಇಟ್ಟು ಗೆಲ್ಲಿಸಿದ್ದು ಅವರ ಪ್ರೀತಿ ವಿಶ್ವಾಸ ಉಳಿಸಿಕೊಳ್ಳುತ್ತೇನೆ. ಬ್ಯಾಂಕ್‌ಗೆ ಸ್ವಂತ ನಿವೇಶನ ಮತ್ತು ಕಟ್ಟಡ ನಿರ್ಮಿಸಲು ಎಲ್ಲರ ಸಹಕಾರದೊಂದಿಗೆ ಕೆಲಸ ಮಾಡುತ್ತೇನೆ ಎಂದರು.

ಉಪಾಧ್ಯಕ್ಷ ಕೊರಟಿಕೆರೆ ಸತೀಶ್, ನಿರ್ದೇಶಕರಾದ ಬಿ.ಎಂ. ಪ್ರಸನ್ನ, ಎಂ.ಪಿ. ತಾರಾನಾಥ್, ಎಸ್.ಕೆ. ನಾಗೇಶ್, ಬಿ.ಬಿ. ಶಿವರಾಜ್, ಬಿ.ಎಲ್. ಲಕ್ಷ್ಮಣ್, ಬ್ಯಾಂಕ್ ವ್ಯವಸ್ಥಾಪಕ ಶಿವಶಂಕರ್, ಪುರಸಭೆ ಸದಸ್ಯ ಜಗದೀಶ್ ಇತರರಿದ್ದರು.

# ಶಿಕ್ಷಣ ವ್ಯಾಪಾರದ ಸರಕಾಗದಿರಲಿ




ಚನ್ನರಾಯಪಟ್ಟಣ: ವ್ಯಾಪಾರ ಉದ್ದೇಶದಿಂದ ಶಿಕ್ಷಣ ಸಂಸ್ಥೆಗಳನ್ನು ನಡೆಸಬಾರದು ಎಂದು ಹೊಯ್ಸಳ ನ್ಯಾಷನಲ್ ಸ್ಕೂಲ್ ಕಾರ್ಯದರ್ಶಿ ಮೆಡಿಕಲ್ ರಾಮೇಗೌಡ ಹೇಳಿದರು.

ತಾಲ್ಲೂಕಿನ ದಿಡಗ ಗ್ರಾಮದ ಹೊಯ್ಸಳ ನ್ಯಾಷನಲ್ ಸ್ಕೂಲ್ ವತಿಯಿಂದ ಹಮ್ಮಿಕೊಂಡಿದ್ದ ಸರಸ್ವತಿ ಪೂಜೆ ಹಾಗೂ ವಿದ್ಯಾರ್ಥಿಗಳ ಪದವಿ ಪ್ರಧಾನ ಸಮಾರಂಭದಲ್ಲಿ ಮಾತನಾಡಿ, ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ಕಲ್ಪಿಸಬೇಕು. ಹಣ ಗಳಿಸಲು ಶಿಕ್ಷಣ ವ್ಯವಸ್ಥೆಯನ್ನು ದುರ್ಬಳಕೆ ಮಾಡಿಕೊಳ್ಳುವುದು ಉತ್ತಮ ಬೆಳವಣಿಗೆಯಲ್ಲ. ಬದಲಿಗೆ ಸಮಾಜದ ಏಳಿಗೆ ಸಲುವಾಗಿ ವಿದ್ಯಾರ್ಥಿಗಳಿಗೆ ಮೌಲ್ಯಾಧಾರಿತ ಶಿಕ್ಷಣ ನೀಡಬೇಕು. ಶಿಕ್ಷಣವನ್ನು ಉಚಿತವಾಗಿ ನೀಡಲು ಸಾಧ್ಯವಿಲ್ಲ ಆದರೆ ಪಾಲಕರಿಗೆ ತೊಂದರೆಯಾಗದಂತೆ ವ್ಯವಸ್ಥೆಗೆ ಪೂರಕವಾಗಿ ಅಗತ್ಯ ಫೀಜ್ ಪಡೆದರೆ ಸೂಕ್ತ ಎಂದು ತಿಳಿಸಿದರು.

ಮಕ್ಕಳ ಶೈಕ್ಷಣಿಕ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಹಾಗೂ ಜವಾಬ್ದಾರಿ ಪ್ರಮುಖವಾಗಿದೆ. ಶಾಲೆಯಲ್ಲಿ ಶಿಕ್ಷಕರು ನೀಡುವ ಮೌಲ್ಯಯುತ ಶಿಕ್ಷಣದ ಜತೆಗೆ ಮನೆಯಲ್ಲಿ ಪಾಲಕರು ಸಂಸ್ಕಾರ ನೀಡುವುದು ಅಗತ್ಯವಿದೆ ಎಂದು ಪಾಲಕರಿಗೆ ಸಲಹೆ ನೀಡಿದರು.

ಶಾಲೆಯಲ್ಲಿ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ನಡುವೆ ಶೈಕ್ಷಣಿಕ ಸಂಬಂಧ ಮಾತ್ರ ಇರಬೇಕು. ಉಳಿದ ಹಣಕಾಸು ಇಲ್ಲವೆ ಇತರೆ ವ್ಯವಹಾರವು ಪಾಲಕರು ಹಾಗೂ ಆಡಳಿತ ವರ್ಗದ ಮಧ್ಯೆ ಗೌಪ್ಯವಾಗಿರಬೇಕು. ಇದರಿಂದ ಶೈಕ್ಷಣಿಕ ವ್ಯವಸ್ಥೆಯು ತಿಳಿಯಾಗಿರಲಿದೆ ಎಂದರು.

ಹೊಯ್ಸಳ ವಿದ್ಯಾಸಂಸ್ಥೆಯ ಮುಖ್ಯಶಿಕ್ಷಕ ಬಿ.ಎಚ್.ನಂದೀಶ್ ಮಾತನಾಡಿ, ಮಕ್ಕಳ ಮನಸ್ಸು ಮೆದುವಾದ ಮಣ್ಣಿನಂತೆ. ಮೌಲ್ಯಯುತ ಶಿಕ್ಷಣ ಎಂಬ ನೀರೆರೆದು ಹದಗೊಳಿಸಿ ಮಡಿಕೆ ಮಾಡಿದರೆ ನೂರಾರು ಕಾಲ ಉಳಿಯಲಿದೆ ಎಂದರು.

ಉತ್ತಮ ಅಂಕಗಳನ್ನು ಪಡೆದಿರುವ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಸಂಸ್ಥೆಯ ಅಧ್ಯಕ್ಷೆ ಶಕುಂತಲಾ ರಾಮೇಗೌಡ, ಹೊಯ್ಸಳ ವಿದ್ಯಾಸಂಸ್ಥೆಯ ಮುಖ್ಯಶಿಕ್ಷಕ ಬಿ.ಎಚ್.ನಂದೀಶ್, ಸಹಶಿಕ್ಷಕ ಪುಟ್ಟೇಗೌಡ, ಶಾಲಾ ಉಸ್ತುವಾರಿ ರೋಹಿತ್ ಇತರರಿದ್ದರು.

# ಯುವ ಜನಾಂಗದಲ್ಲಿ ಹೆಚ್ಚುತ್ತಿರುವ ಹೆಚ್‌ಐವಿ




ಹಾಸನ: ಇತ್ತೀಚಿನ ದಿನಗಳಲ್ಲಿ ಹೆಚ್‌ಐವಿ ಸೋಂಕಿನ ಕೆಂಗಣ್ಣಿಗೆ ಯುವ ಜನತೆ ತುತ್ತಾಗುತ್ತಿದ್ದಾರೆ ಎಂದು ಹಿಮ್ಸ್‌ನ ಐಸಿಟಿಸಿ ಕೌನ್ಸಿಲರ್ ಕೆ.ಎಚ್. ಮಂಜುಳಾ ಹೇಳಿದರು.

ನಗರದ ಆರ್.ಸಿ. ರಸ್ತೆಯ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ರೆಡ್ ರಿಬ್ಬನ್ ಕ್ಲಬ್ ವತಿಯಿಂದ ಆಯೋಜಿಸಿದ್ದ ಏಡ್ಸ್ ಜಾಗೃತಿ ಮತ್ತು ತಡೆಗಟ್ಟುವಿಕೆ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯುವ ಜನತೆಯು ಆದಷ್ಟು ಜಾಗರೂಕರಾಗಿ ಹೆಜ್ಜೆ ಇಡಬೇಕು. ಭಾರತದಲ್ಲಿ 2.4 ಮಿಲಿಯನ್ ಹೆಚ್ ಐವಿ ಸೋಂಕಿತರಿದ್ದಾರೆ. ಇದು ನಿಜವಾಗಿಯೂ ದುರ್ದೈವದ ಸಂಗತಿ. ರಕ್ತದಾನ ಮಹಾದಾನ. ಆದರೆ ಇತರರಿಂದ ರಕ್ತವನ್ನ ಪಡೆಯುವುದಕ್ಕಿಂತ ಮುಂಚಿತವಾಗಿ ರಕ್ತದ ಪರೀಕ್ಷೆ ಮಾಡಿಸುವುದು ಸೂಕ್ತ. ಏಡ್ಸ್ ಕಾಯಿಲೆ ಮಾನವರಲ್ಲಿರುವ ರೋಗ ನಿರೋಧಕ ಶಕ್ತಿಯನ್ನು ಕುಗ್ಗಿಸುತ್ತದೆ. ವೈರಸ್‌ನ ತೀವ್ರತೆ ಅತಿರೇಕಕ್ಕೆ ತಲುಪಿದರೆ ಸೋಂಕಿತ ವ್ಯಕ್ತಿಯು ಸಾವನ್ನಪ್ಪುವ ಸಾಧ್ಯತೆ ಹೆಚ್ಚಿರುತ್ತದೆ. ಅಸುರಕ್ಷಿತ ಲೈಂಗಿಕ ಕ್ರಿಯೆ, ಸೋಂಕಿತ ವ್ಯಕ್ತಿಯಿಂದ ರಕ್ತವನ್ನ ಪಡೆದುಕೊಳ್ಳುವುದು, ಸೋಂಕಿತ ಸೂಜಿ-ಸೀರಂಜ್‌ಗಳ ಬಳಕೆ, ಹೆಚ್‌ಐಗೆ ತುತ್ತಾಗಿರುವ ತಾಯಿ ಮಗುವಿಗೆ ಸ್ತನಪಾನ ಮಾಡಿಸಿದಾಗ ಸೋಂಕು ಹರಡುತ್ತದೆ. ಎಲ್ಲಾ ಯುವಕ-ಯುವತಿಯರು ಸರಿಯಾದ ದಾರಿಯಲ್ಲಿ ಸಾಗಿ ವಿವಾಹವಾಗುವವರೆಗೂ ಬ್ರಹ್ಮಚರ್ಯ ಪಾಲನೆ ಮಾಡಿದರೆ ಮಾರಣಾಂತಿಕ ಸೋಂಕಿನ ಹರಡುವಿಕೆಯನ್ನ ನಿಲ್ಲಿಸಬಹುದು. ಕ್ಷಣಿಕ ಸುಖಕ್ಕಾಗಿ ನಿಮ್ಮ ಮುಂದಿನ ಭವಿಷ್ಯವನ್ನ ಹಾಳು ಮಾಡಿಕೊಳ್ಳಬೇಡಿ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಹೆಚ್‌ಐವಿ ಹಾಗೂ ಏಡ್ಸ್‌ಗೆ ಸಂಭಂಧಿಸಿದಂತೆ ಎಲ್ಲರೂ ಎಚ್ಚರದಿಂದ ಮುನ್ನಡೆಯಬೇಕು. ನಾವು ಸಾಗುವ ಮಾರ್ಗ ಉತ್ತಮವಾಗಿದ್ದರೆ ಇಂತಹ ಸೋಂಕುಗಳ ಮೂಲವನ್ನೇ ನಾಶಪಡಿಸಬಹುದು. ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ನಿಟ್ಟಿನಲ್ಲಿ ದಿಟ್ಟ ಹೆಜ್ಜೆಯನ್ನಿಟ್ಟು ಸಾಗಬೇಕು. ಏಡ್ಸ್ ಎಂದರೆ ಭಯಬೇಡ ಜಾಗೃತವಹಿಸಿ ಎಂದು ತಿಳಿಸಿದರು.

ರೆಡ್ ರಿಬ್ಬನ್ ಕ್ಲಬ್ ಸಂಚಾಲಕ ಪಿ. ನಂದನ್ ಹಾಗೂ ಇತರರು ಹಾಜರಿದ್ದರು.

# ಬಾಗೂರು ಸಹಕಾರ ಸಂಘಕ್ಕೆ ಅವಿರೋಧ ಆಯ್ಕೆ




ಚನ್ನರಾಯಪಟ್ಟಣ: ತಾಲ್ಲೂಕಿನ ಬಾಗೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಡಿ.ಎನ್. ನಾಗರಾಜ್ ಹಾಗೂ ಉಪಾಧ್ಯಕ್ಷರಾಗಿ ಗಂಗಾಧರ್ ಬುಧವಾರ ಅವಿರೋಧ ಆಯ್ಕೆಯಾದರು.

ಚುನಾವಣಾಧಿಕಾರಿ ಲತಾ ಆಯ್ಕೆ ಘೋಷಿಸಿದರು. ನೂತನ ಅಧ್ಯಕ್ಷ ಡಿ.ಎನ್. ನಾಗರಾಜ್ ಅವರು ಮಾತನಾಡಿ, ಕ್ಷೇತ್ರದ ಶಾಸಕರು ಹಾಗೂ ಜಿಲ್ಲಾ ಬ್ಯಾಂಕ್ ನಿರ್ದೇಶಕರಾಗಿರುವ ಸಿ.ಎನ್. ಬಾಲಕೃಷ್ಣ ಅವರ ಸಲಹೆ, ಸಹಕಾರ ಹಾಗೂ ಮಾರ್ಗದರ್ಶನ ಪಡೆದು ಹೊಸದಾಗಿ ರೈತರು, ಷೇರುದಾರರಿಗೆ ಹೆಚ್ಚಿನ ಪ್ರಮಾಣದಲ್ಲಿ ಸಾಲ ಸೌಲಭ್ಯ ಕಲ್ಪಿಸಲಾಗುವುದು ಎಂದು ತಿಳಿಸಿದರು.

ನಿರ್ದೇಶಕರಾದ ಬಿ.ಹೆಚ್. ಶಿವಣ್ಣ, ಚನ್ನಕೇಶವ (ಹರೀಶ್), ಮರುವನಹಳ್ಳಿ ಕೃಷ್ಣೇಗೌಡ, ಪದ್ಮ, ಸಾಗರ್, ವಿಜಯಕುಮಾರ್, ಬಿ.ವಿ. ರಂಗಸ್ವಾಮಿ, ಅನ್ನಪೂರ್ಣ, ಬನವಾಸೆ ಸುರೇಶ್, ಬಿ.ಟಿ. ರಂಗಸ್ವಾಮಿ, ಬಾಗೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ.ಎನ್. ಕೆಂಪೇಗೌಡ ಮತ್ತಿತರರಿದ್ದರು.

# ನೀರು ಕೊಟ್ಟಾಕೆಯ ಸರವನ್ನೇ ಕಸಿದ ದುರುಳ!

ಚನ್ನರಾಯಪಟ್ಟಣ: ನೀರು ಕುಡಿಯುವ ನೆಪದಲ್ಲಿ ಮನೆಗೆ ಬಂದ ಅಪರಿಚಿತ ವ್ಯಕ್ತಿ ಮಹಿಳೆ ಕೊರಳಿನಿಂದ 20 ಗ್ರಾಂ ತೂಕದ ಚಿನ್ನದ ಸರ ಕಿತ್ತುಕೊಂಡು ಪರಾರಿಯಾಗಿರುವ ಘಟನೆ ತಾಲ್ಲೂಕಿನ ಅನತನಹಳ್ಳಿ ಗ್ರಾಮದಲ್ಲಿ ನಡೆದಿದೆ.

ನೀಲಮ್ಮ ಎಂಬುವವರ ಮನೆಗೆ ಮಂಗಳವಾರ ಮಧ್ಯಾಹ್ನ ಬಂದಿರುವ ವ್ಯಕ್ತಿ ನೀರು ಬೇಕೆಂದು ಕೇಳಿದ್ದಾನೆ. ನೀಲಮ್ಮ ನೀರು ತಂದು ಕೊಟ್ಟಾಗ ಕುಡಿದು ಮತ್ತೆ ಬೇಕು ಎಂದಿದ್ದಾನೆ. ಎರಡನೇ ಸಲ ನೀರು ಕುಡಿದು ವಾಪಾಸ್ಸಾದ ವ್ಯಕ್ತಿ ಸುಮಾರು ಒಂದು ಗಂಟೆ ಬಳಿಕ ಪುನಃ ಬಂದು ಖಾಲಿ ಬಾಟಲಿಗೆ ನೀರು ತುಂಬಿಸಿಕೊಡಿ ಎಂದು ಕೇಳಿದ್ದಾನೆ. ಮನೆಯಲ್ಲಿ ಯಾರೂ ಇಲ್ಲದೆ ನೀಲಮ್ಮ ಒಬ್ಬರೇ ಇರುವುದನ್ನು ಖಚಿತಪಡಿಸಿಕೊಂಡ ಆತ ಬಾಟಲಿ ಕೈಗೆ ಕೊಡುತ್ತಿದ್ದಂತೆ ಕೊರಳಿನಿಂದ ಚಿನ್ನದ ಸರ ದೋಚಿ ಅಲ್ಲಿಂದ ಬೈಕ್ ಹತ್ತಿ ಪರಾರಿಯಾಗಿದ್ದಾನೆ. 1.30 ಲಕ್ಷ ರೂ. ಮೌಲ್ಯದ ಚಿನ್ನದ ಸರ ಅಪಹರಣವಾಗಿದೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ಮಂಜುಳಾಗೆ ಸದ್ಭಾವನ ಪ್ರಶಸ್ತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಬೆಂಗಳೂರು ರವೀಂದ್ರ ಕಲಾಕ್ಷೇತ್ರದಲ್ಲಿ ಶ್ರೀ ಸರ್ವೇಜನಾಃ ಆರ್ಟ್ ಮತ್ತು ಕಲ್ಚರಲ್ ಟ್ರಸ್ಟ್ ಹಾಗೂ ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮಾ. 24ರ ಸೋಮವಾರ ನಡೆದ 8ನೇ ವಾರ್ಷಿಕೋತ್ಸವದ ಸಾಂಸ್ಕೃತಿಕ ಮಹೋತ್ಸವದಲ್ಲಿ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಕೊಡಲಾಗುವ ವಿಧಾನಸೌಧ ನಿರ್ಮಾತೃ ಶ್ರೀ ದಿ. ಕೆಂಗಲ್ ಹನುಮಂತಯ್ಯ ಸದ್ಭಾವನ ಪ್ರಶಸ್ತಿಯನ್ನು ಚನ್ನರಾಯಪಟ್ಟಣ ತಾಲ್ಲೂಕಿನ ಕನುವನಘಟ್ಟ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಡಿ.ಮಂಜುಳಾ ಅವರಿಗೆ ನೀಡಿ ಗೌರವಿಸಲಾಯಿತು.

ಸರ್ವೇಜನಾಃ ಆರ್ಟ್ಸ್ ಮತ್ತು ಕಲ್ಚರಲ್ ಟ್ರಸ್ಟ್‌ನ ರಾಜ್ಯಾಧ್ಯಕ್ಷೆ ಲಕ್ಷಿತಾ, ಗೌರವಾಧ್ಯಕ್ಷ ಕೆಂಚನೂರು ಶಂಕರ, ಹಾವೇರಿ ಹೊಸಮಠದ ಶ್ರೀ ಬಸವ ಶಾಂತಲಿಂಗ ಸ್ವಾಮೀಜಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಶ್ರಾಂತ ನಿರ್ದೇಶಕ ಡಾ.ಕೆ.ಪಿ. ಪುತ್ತುರಾಯ, ಚಲನಚಿತ್ರ ಕಲಾವಿದ ಶಶಿಧರ್ ಕೋಟೆ, ಚಲನಚಿತ್ರ ನಟ ಶಿವಕುಮಾರ ಆರಾಧ್ಯ ಇತರರಿದ್ದರು.

# 6,900 ಬಗರ್ ಹುಕುಂ ಅರ್ಜಿ ಬಾಕಿ: ಡಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ಬಗರ್ ಹುಕುಂ ಯೋಜನೆಯಡಿ ತಾಲ್ಲೂಕಿನಲ್ಲಿ 6,900 ಅರ್ಜಿಗಳು ಬಾಕಿ ಉಳಿದಿದ್ದು ಶೀಘ್ರ ಇತ್ಯರ್ಥಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ತಿಳಿಸಿದರು.

ಪಟ್ಟಣದ ತಾಲ್ಲೂಕು ಕಚೇರಿಗೆ ಮಂಗಳವಾರ ಭೇಟಿ ನೀಡಿದ್ದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಶೀಘ್ರ ಅರ್ಜಿ ಎಲ್ಲವನ್ನೂ ವಿಲೇವಾರಿ ಮಾಡುವಂತೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಆಧಾರ್, ಭೂಮಿ, ಕೇಂದ್ರ ನಿರ್ವಹಣೆ ವಿಷಯದಲ್ಲಿ ನಮ್ಮ ಜಿಲ್ಲೆ ರಾಜ್ಯದಲ್ಲೇ ದ್ವಿತೀಯ ಸ್ಥಾನದಲ್ಲಿದ್ದು, ಸದ್ಯದಲ್ಲೇ ಪ್ರಥಮ ಸ್ಥಾನಕ್ಕೆ ತರುವ ಎಲ್ಲಾ ಪ್ರಯತ್ನಗಳು ನಡೆಯುತ್ತಿವೆ ಎಂದು ಹೇಳಿದರು.

ಪಟ್ಟಣದ ಸಾರ್ವಜನಿಕ ಸಮುದಾಯ ಭವನಕ್ಕೆ ಅಡ್ಡಲಾಗಿ ಕಟ್ಟಲಾಗಿರುವ ತಡೆಗೋಡೆಯನ್ನು ತೆರವುಗೊಳಿಸಲಾಗುವುದು. ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಶ್ನೆಗೆ ಉತ್ತರಿಸಿದರು.

ಹಲವು ವರ್ಷಗಳಿಂದ ಬಗರ್ ಹುಕುಂ ಸಕ್ರಮೀಕರಣ ಸಮಿತಿಯ ಸಭೆ ಕರೆಯದೆ ಸಾವಿರಾರು ಅರ್ಜಿಗಳು ಬಾಕಿ ಉಳಿದಿವೆ. ಶೀಘ್ರವೇ ನಡೆಸಿ ಅರ್ಜಿಗಳನ್ನು ವಿಲೇ ಮಾಡಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಬಗರ್ ಹುಕುಂ ಸಕ್ರಮೀಕರಣ ಸಮಿತಿ ಸದಸ್ಯ ಹೆಚ್.ಟಿ. ಲಕ್ಷ್ಮಣ ಜಿಲ್ಲಾಧಿಕಾರಿ ಗಮನಕ್ಕೆ ತಂದರು. ತಹಶೀಲ್ದಾರ್ ವೈ.ಎಂ. ರೇಣುಕುಮಾರ್ ಇತರರಿದ್ದರು.

# ಯುಗಾದಿ ಹಬ್ಬದ ಮಹತ್ವ ಮತ್ತು ಆಚರಣೆ



ಹಿಂದೂ ಧಾರ್ಮಿಕತೆಯಲ್ಲಿ ಯುಗಾದಿ ಹಬ್ಬವು ವಿಶೇಷ ಸ್ಥಾನವನ್ನು ಪಡೆದಿದೆ. ಇದು ಹೊಸ ವರ್ಷದ ಆರಂಭವನ್ನು ಸೂಚಿಸುವ ಹಬ್ಬವಾಗಿದ್ದು, ಚೈತ್ರ ಮಾಸದ ಶುಕ್ಲ ಪಕ್ಷದ ಪ್ರತಿಪದೆ ತಿಥಿಯಂದು ಆಚರಿಸಲಾಗುತ್ತದೆ. ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ಮತ್ತು ಮಹಾರಾಷ್ಟ್ರದಲ್ಲಿ ಈ ಹಬ್ಬವನ್ನು ಭಕ್ತಿ ಭಾವದಿಂದ ಮತ್ತು ಸಂತೋಷದಿಂದ ಆಚರಿಸಲಾಗುತ್ತದೆ. ಯುಗಾದಿ ಎಂದರೆ ಯುಗದ ಆದಿ ಅಥವಾ ಹೊಸ ಯುಗದ ಪ್ರಾರಂಭ ಎಂಬರ್ಥವನ್ನು ಹೊಂದಿದ್ದು, ಇದು ಜೀವನದಲ್ಲಿ ನವ ಚೈತನ್ಯ, ಆಶಾಭಾವನೆ ಮತ್ತು ಸಮೃದ್ಧಿಯ ಸಂಕೇತವಾಗಿದೆ. ಧಾರ್ಮಿಕ ಮಹತ್ವ ಹಿಂದೂ ಪುರಾಣಗಳ ಪ್ರಕಾರ, ಯುಗಾದಿ ದಿನದಂದು ಬ್ರಹ್ಮ ದೇವರು ಸೃಷ್ಟಿಯನ್ನು ಆರಂಭಿಸಿದರು ಎಂಬ ನಂಬಿಕೆ ಇದೆ. ಈ ದಿನವನ್ನು ಸತ್ಯ ಯುಗದ ಆರಂಭವೆಂದೂ ಪರಿಗಣಿಸಲಾಗುತ್ತದೆ.

ಶ್ರೀ ಕೃಷ್ಣನ ಕಾಲದಲ್ಲಿ ಈ ದಿನವನ್ನು ವಿಶೇಷವಾಗಿ ಆಚರಿಸಲಾಗಿತ್ತು ಎಂಬ ಉಲ್ಲೇಖಗಳು ಶಾಸ್ತ್ರಗಳಲ್ಲಿ ದೊರೆಯುತ್ತವೆ. ಇದಲ್ಲದೆ, ಚಂದ್ರಮಾನ ಪಂಚಾಂಗದ ಪ್ರಕಾರ ಹೊಸ ವರ್ಷದ ಆರಂಭವಾಗಿ ಈ ದಿನವು ಧಾರ್ಮಿಕ ಮತ್ತು ಸಾಂಸ್ಕೃತಿಕ ದೃಷ್ಟಿಯಿಂದ ಮಹತ್ವದ್ದಾಗಿದೆ.

ಈ ದಿನ ಗ್ರಹಗಳ ಸಂಗಮವು ವಿಶೇಷವಾಗಿರುತ್ತದೆ ಎಂದು ಜ್ಯೋತಿಷ್ಯ ಶಾಸ್ತ್ರದಲ್ಲಿ ತಿಳಿಸಲಾಗಿದೆ. ಇದು ಜನರ ಜೀವನದ ಮೇಲೆ ಸಕಾರಾತ್ಮಕ ಪ್ರಭಾವ

**ಆಚರಣೆಯ ವಿಧಾನ :** ಯುಗಾದಿ ಹಬ್ಬದ ಆಚರಣೆಯು ವಿಶಿಷ್ಟವಾದ ಆಚಾರ-ವಿಚಾರಗಳಿಂದ ಕೂಡಿದೆ. ಈ ದಿನ ಬೆಳಗ್ಗೆ ಎದ್ದ ತಕ್ಷಣ ಎಣ್ಣೆ ಸ್ನಾನ ಮಾಡುವುದು ಸಾಂಪ್ರದಾಯಿಕವಾಗಿದೆ. ಮನೆಯ ಮುಂಭಾಗವನ್ನು ಸ್ವಚ್ಛಗೊಳಿಸಿ, ರಂಗೋಲಿ ಹಾಕಿ, ಮಾವಿನ ಎಲೆಯ ತೋರಣಗಳಿಂದ ಅಲಂಕರಿಸಲಾಗುತ್ತದೆ. ದೇವರ ಪೂಜೆಯ ನಂತರ ಬೇವು-ಬೆಲ್ಲದ ಪ್ರಸಾದವನ್ನು ಸೇವಿಸುವುದು ಯುಗಾದಿಯ ಮುಖ್ಯ ಆಚರಣೆಯಾಗಿದೆ. ಬೇವು ಜೀವನದ ಕಷ್ಟಗಳನ್ನು ಮತ್ತು ಬೆಲ್ಲ ಸುಖವನ್ನು ಸಂಕೇತಿಸುತ್ತದೆ. ಇವೆರಡನ್ನೂ ಒಟ್ಟಿಗೆ ಸೇವಿಸುವ ಮೂಲಕ ಜೀವನದಲ್ಲಿ ಸುಖ-ದುಃಖ ಎರಡನ್ನೂ ಸಮಾನವಾಗಿ ಸ್ವೀಕರಿಸುವ ಮನೋಭಾವವನ್ನು ತೋರಿಸಲಾಗುತ್ತದೆ. ಪಂಚಾಂಗ ಶ್ರವಣವು ಯುಗಾದಿಯ ಮತ್ತೊಂದು ಪ್ರಮುಖ ಭಾಗವಾಗಿದೆ. ಈ ದಿನ ಜ್ಯೋತಿಷಿಗಳು ಅಥವಾ ಗುರುಗಳು ಹೊಸ ವರ್ಷದ ಭವಿಷ್ಯವನ್ನು ಗ್ರಹಗಳ ಸ್ಥಾನದ ಆಧಾರದ ಮೇಲೆ ಓದುತ್ತಾರೆ. ಇದು ವ್ಯಕ್ತಿಗಳಿಗೆ ಮತ್ತು ಸಮಾಜಕ್ಕೆ ಮುಂಬರುವ ವರ್ಷದಲ್ಲಿ ಏನಾಗಬಹುದು ಎಂಬ ಒಂದು ದಿಕ್ಸೂಚಿಯನ್ನು ನೀಡುತ್ತದೆ. ಈ ಸಂದರ್ಭದಲ್ಲಿ ದೇವಾಲಯಗಳಲ್ಲಿ ವಿಶೇಷ ಪೂಜೆಗಳು, ಹೋಮ-ಹವನಗಳು ನಡೆಯುತ್ತವೆ.

**ಸಾಂಸ್ಕೃತಿಕ ಮತ್ತು ಸಾಮಾಜಿಕ ಆಯಾಮ :** ಯುಗಾದಿ ಕೇವಲ ಧಾರ್ಮಿಕ ಹಬ್ಬವಷ್ಟೇ ಅಲ್ಲ, ಸಾಮಾಜಿಕ ಸಂಗಮದ ಸಂಕೇತವೂ ಹೌದು. ಈ ದಿನ ಜನರು ಹೊಸ ಬಟ್ಟೆ ಧರಿಸಿ, ಸಂಬಂಧಿಕರು ಮತ್ತು ಸ್ನೇಹಿತರನ್ನು ಭೇಟಿಯಾಗಿ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಾರೆ. ಊಟದಲ್ಲಿ ಒಗ್ಗರಣೆ ಚಟ್ನಿ, ಕೋಸಂಬರಿ, ಹೋಳಿಗೆ, ಪಾಯಸ ಮುಂತಾದ ಸಾಂಪ್ರದಾಯಿಕ ಖಾದ್ಯಗಳು ಸ್ಥಾನ ಪಡೆಯುತ್ತವೆ. ಗ್ರಾಮೀಣ ಭಾಗಗಳಲ್ಲಿ ಜಾತ್ರೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಈ ಹಬ್ಬಕ್ಕೆ ಮೆರಗನ್ನು ತರುತ್ತವೆ.

**ಆಧುನಿಕತೆಯಲ್ಲಿ ಯುಗಾದಿ :** ಆಧುನಿಕ ಜೀವನದ ಒತ್ತಡದ ನಡುವೆಯೂ ಯುಗಾದಿಯ ಮಹತ್ವ ಕಡಿಮೆಯಾಗಿಲ್ಲ. ಯುವ ಜನಾಂಗವೂ ಈ ಹಬ್ಬವನ್ನು ಆಚರಿಸುವ ಮೂಲಕ ಸಂಸ್ಕೃತಿಯೊಂದಿಗೆ ಸಂಪರ್ಕವನ್ನು ಕಾಯ್ದುಕೊಂಡಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಶುಭಾಶಯ ಸಂದೇಶಗಳು, ಯುಗಾದಿ ವಿಶೇಷ ಕಾರ್ಯಕ್ರಮಗಳ ಆಯೋಜನೆಯ ಮೂಲಕ ಈ ಹಬ್ಬ ಇಂದಿಗೂ ಜೀವಂತವಾಗಿದೆ.ಯುಗಾದಿ ಹಬ್ಬವು ಹಿಂದೂ ಧಾರ್ಮಿಕತೆಯಲ್ಲಿ ಕೇವಲ ಹೊಸ ವರ್ಷದ ಸಂಭ್ರಮವಷ್ಟೇ ಅಲ್ಲ, ಜೀವನದ ಸಮತೋಲನ, ಆಧ್ಯಾತ್ಮಿಕ ಚೈತನ್ಯ ಮತ್ತು ಸಾಮಾಜಿಕ ಸಾಮರಸ್ಯವನ್ನು ಸಾರುವ ಒಂದು ಮಹತ್ವದ ಆಚರಣೆಯಾಗಿದೆ. ಈ ವರ್ಷವೂ ಜನರು ಯುಗಾದಿಯನ್ನು ಭಕ್ತಿ ಮತ್ತು ಉತ್ಸಾಹದಿಂದ ಆಚರಿಸಲು ಸಜ್ಜಾಗಿದ್ದಾರೆ.

# ಪ್ರತ್ಯೇಕ ಅಪಘಾತ: ಮೂವರು ಸಾವು



ಹಾಸನ: ಚನ್ನರಾಯಪಟ್ಟಣ ತಾಲ್ಲೂಕಿನ ಚಿಕ್ಕಗೊಂಡನಹಳ್ಳಿ ಗೇಟ್‌ನ ಸುರುಚಿ ಹೋಟೆಲ್ ಸಮೀಪ ಪ್ಲೈವುಡ್ ಲಾರಿ ನಿಯಂತ್ರಣ ತಪ್ಪಿ ಗುಂಡಿಗೆ ಮಗುಚಿ ಕ್ಲೀನರ್ ಮೃತಪಟ್ಟಿದ್ದಾರೆ.

ಮಂಗಳೂರು ಜಿಲ್ಲೆಯ ಕುಡರೋಲಿ ಗ್ರಾಮದ ಉಮ್ಮರ್ ಸಲ್ಮಾನ್ (18) ಮೃತ. ತಿಂಗಳ ಹಿಂದಷ್ಟೇ ತಾತ ಮೊಹಮ್ಮದ್ ಆಶಾದ್ ಅವರ ಲಾರಿ ಕ್ಲೀನರ್ ಆಗಿ ಸೇರಿಕೊಂಡಿದ್ದ ಉಮ್ಮರ್ ಮಂಗಳೂರಿನಲ್ಲಿ ಪ್ಲೈವುಡ್ ತುಂಬಿಕೊಂಡು ಚನ್ನರಾಯಪಟ್ಟಣ ಮಾರ್ಗವಾಗಿ ತುರುವೇಕೆರೆಗೆ ತೆರಳುತ್ತಿದ್ದಾಗ ಲಾರಿ ರಸ್ತೆಯ ಪಕ್ಕದ ಕಬ್ಬಿಣದ ಬೇಲಿಗೆ ಡಿಕ್ಕಿಯಾಗಿ ಗುಂಡಿಗೆ ಮುಗಿಚಿ ಬಿದ್ದಿದೆ. ಲಾರಿ ಅಡಿಗೆ ಸಿಲುಕಿದ್ದ ಮೊಮ್ಮಗನನ್ನು ಮೊಹಮ್ಮದ್ ಆಶಾದ್ ಹೊರಗೆ ತೆಗೆದಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಚನ್ನರಾಯಪಟ್ಟಣ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪಾದಚಾರಿ ಸಾವು

ಅರಸೀಕೆರೆ ತಾಲ್ಲೂಕು ನಾರಾಯಣಘಟ್ಟಹಳ್ಳಿ ರಸ್ತೆಯಲ್ಲಿ ಜಮೀನಿಗೆ ತೆರಳುತ್ತಿದ್ದ ವ್ಯಕ್ತಿಗೆ ಕಾರು ಡಿಕ್ಕಿಯಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.


ತಿರುಪತಿಹಳ್ಳಿ ಗ್ರಾಮದ ಶಂಭುಲಿಂಗೇಗೌಡ (57) ಮೃತರು. ರಸ್ತೆಬದಿ ನಡೆದು ಹೋಗುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ತಾಲ್ಲೂಕು ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟಿದ್ದಾರೆ. ಅರಸೀಕೆರೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೈಕ್ ಸವಾರ ಸಾವು

ಟ್ರ್ಯಾಕ್ಟರ್ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಅರಸೀಕೆರೆ ತಾಲ್ಲೂಕು ಕಾರೇಹಳ್ಳಿ ಗೇಟ್ ಸಮೀಪ ನಡೆದಿದೆ. ಕಾರೇಹಳ್ಳಿಹಟ್ಟಿ ಗ್ರಾಮದ ದರ್ಶನ್‌ನಾಯ್ಕ ಮೃತರು. ರಾತ್ರಿ 9ರ ಸಮಯದಲ್ಲಿ ಬೈಕ್‌ನಲ್ಲಿ ಹೋಗುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಟ್ರ್ಯಾಕ್ಟರ್ ಡಿಕ್ಕಿಯಾಗಿದೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಕಲೇಶಪುರ : ಪುರಸಭೆ 90 ಲಕ್ಷ ರೂ. ಉಳಿತಾಯ ಬಜೆಟ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಪುರಸಭೆ ಅಧ್ಯಕ್ಷೆ ಜ್ಯೋತಿ ರಾಜಕುಮಾರ್ ಮಂಗಳವಾರ 90,46,840 ರೂ. ಉಳಿತಾಯ ಬಜೆಟ್ ಮಂಡಿಸಿದರು.

2025-26ನೇ ಸಾಲಿನ ಬಜೆಟ್ ಮಂಡನೆ ಸಭೆ ಪುರಸಭೆ ಸಭಾಂಗಣದಲ್ಲಿ ನಡೆಯಿತು. ಪ್ರಾರಂಭಿಕ ಶುಲ್ಕ 9,60,67,840 ರೂ., 2025-26ನೇ ಸಾಲಿನ ನಿರೀಕ್ಷಿತ ಜಮಾ 28,59,67,500 ರೂ. ಆಗಿದ್ದು, 38,20,35,340 ರೂ. ಬಜೆಟ್ ಗಾತ್ರ. ನಿರೀಕ್ಷಿತ ಖರ್ಚು 37,29,88,500 ರೂಪಾಯಿ ಆಗಿದ್ದು ಖರ್ಚು ಕಳೆದು 90,46,840 ರೂ. ಉಳಿಕೆ ಬಜೆಟ್ ಮಂಡಿಸಿದರು. ನಂತರ ಮಾತನಾಡಿ, ಪಟ್ಟಣದ ಸಮಗ್ರ ಅಭಿವೃದ್ಧಿ ಯೋಜನೆಗಳೊಂದಿಗೆ ಬಜೆಟ್ ಮಂಡಿಸಲಾಗಿದೆ. ಜನಪ್ರತಿನಿಧಿಗಳ ಸಲಹೆ ಹಾಗೂ ಸಹಕಾರದೊಂದಿಗೆ ಪಟ್ಟಣದ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದು ಹೇಳಿದರು.

ರಸ್ತೆ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪಗಳ ಅಭಿವೃದ್ಧಿ, ಪಾರ್ಕ್, ಮಾರುಕಟ್ಟೆ ವ್ಯವಸ್ಥೆ ಸುಧಾರಣೆ, ಸ್ಮಶಾನದ ಅಭಿವೃದ್ಧಿ, ಬೀದಿ ನಾಯಿಗಳ ಉಪಟಳಕ್ಕೆ ಕಡಿವಾಣ ಸೇರಿ ಮುಂತಾದ ಕ್ಷೇತ್ರಗಳಿಗೆ ಅಗತ್ಯ ಅನುದಾನ ಮೀಸಲಿಡಲಾಗಿದೆ ಎಂದು ತಿಳಿಸಿದರು. ಪುರಸಭೆ ಉಪಾಧ್ಯಕ್ಷೆ ಜರೀನಾ, ಮುಖ್ಯ ಅಧಿಕಾರಿ ಮಹೇಶ್ವರಪ್ಪ ಹಾಗೂ ಸದಸ್ಯರು ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248